ಅ) ಕುಂದಾಪುರ ವಿಧಾನ ಸಭಾ ಕ್ಷೇತ್ರದಲ್ಲಿ ಪ್ರಾಥಮಿಕ ಶಾಲೆಗಳು, ಪ್ರೌಢಶಾಲೆಗಳು, ಪದವಿ ಪೂರ್ವ ಕಾಲೇಜು ಶಿಕ್ಷಕರ ಕೊರತೆಯಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ?

ಆ) ಹಾಗಿದ್ದಲ್ಲಿ, ಖಾಲಿ ಇರುವ ಶಿಕ್ಷಕರ ಹುದ್ದೆಯನ್ನು ಸರ್ಕಾರ ಎಂದು ಭರ್ತಿ ಮಾಡಲಾಗುವುದು?

ಶ್ರೀ ಎಸ್.ಎಂ. ಯಾಹ್ಯಾ (ಉನ್ನತ ಶಿಕ್ಷಣ ಸಚಿವರು) :

ಅ) ಹೌದು.

ಆ) ಖಾಲಿ ಇರುವ ಎಲ್ಲಾ ಹುದ್ದೆಗಳನ್ನು ಭರ್ತಿಮಾಡಲು ಕ್ರಮ ಕೈಗೊಳ್ಳಲಾಗುತ್ತಿದೆ.

ಕುಂದಾಪುರ ತಾಲ್ಲೂಕಿನಲ್ಲಿರುವ ವೈದ್ಯರುಗಳ ಅಂಕಿ ಸಂಖ್ಯೆಗಳ ಕುರಿತು

569ಎ - ಶ್ರೀ ಪ್ರತಾಪ ಚಂದ್ರಶೆಟ್ಟಿ (ಕುಂದಾಪುರ) : ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಕುಂದಾಪುರ ತಾಲ್ಲೂಕಿನ ಆಸ್ಪತ್ರೆಗಳಲ್ಲಿ ನರ್ಸ್‌ಗಳ ಕೊರತೆ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ?

ಆ) ಹಾಗಿದ್ದಲ್ಲಿ ಈ ಹುದ್ದೆಯನ್ನು ಎಂದು ತುಂಬುವಿರಿ?

ಇ) ಆಸ್ಪತ್ರೆವಾರು ವಿವರ ನೀಡುವುದು

ಡಾ॥ ಎ.ಬಿ. ಮಲಕರೆಡ್ಡಿ (ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು):

ಅ) ಕೊರತೆ ಇರುವುದಿಲ್ಲ.

ಆ) ಉದ್ಭವಿಸುವುದಿಲ್ಲ.

ಇ) ಉದ್ಭವಿಸುವುದಿಲ್ಲ.

ಕುಂದಾಪುರ ತಾಲ್ಲೂಕಿನಲ್ಲಿರುವ ಮಹಿಳಾ ವೈದ್ಯರುಗಳು

569 - ಶ್ರೀ ಪ್ರತಾಪ್‌ಚಂದ್ರ ಶೆಟ್ಟಿ (ಕುಂದಾಪುರ) : ಮಾನ್ಯ ಆರೋಗ್ಯ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಕುಂದಾಪುರ ತಾಲ್ಲೂಕಿನಲ್ಲಿ ವೈದ್ಯಾಧಿಕಾರಿಗಳು ಹಾಗೂ ಮಹಿಳಾ ವೈದ್ಯಾಧೀಕಾರಿಗಳ ಹುದ್ದೆಗಳ ಸಂಖ್ಯೆ ಎಷ್ಟು?

ಆ) ಈ ಪೈಕಿ ಎಷ್ಟು ಹುದ್ದೆಗಳು ಭರ್ತಿಯಾಗಿವೆ? ಹಾಗೂ ಎಷ್ಟು ಹುದ್ದೆಗಳು ಖಾಲಿ ಇವೆ?

ಇ) ಖಾಲಿ ಇರುವ ಹುದ್ದೆಗಳ ಭರ್ತಿ ಮಾಡದೇ ಸಾರ್ವಜನಿಕರಿಗೆ ತೊಂದರೆಯಾಗುತ್ತಿರುವುದು ನಿಜವಲ್ಲವೇ?

ಈ) ಹಾಗಿದ್ದಲ್ಲಿ ಸರ್ಕಾರ ಖಾಲಿ ಇರುವ ಮೇಲ್ಕಂಡ ಹುದ್ದೆಯನ್ನು ಎಂದು ಭರ್ತಿ ಮಾಡಲಾಗುವುದು?

ಡಾ॥ ಎ.ಬಿ. ಮಲಕರೆಡ್ಡಿ (ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು):

ಅ) 31

ಪುರುಷ - 26

ಮಹಿಳಾ - 5

ಆ) ಭರ್ತಿ - 25

ಖಾಲಿ - 6

ಇ) ಹೌದು

ಈ) ಖಾಲಿ ಇರುವ ವೈದ್ಯರ ಹುದ್ದೆಗಳನ್ನು ಆದಷ್ಟು ಜಾಗ್ರತೆ ಮಾಡಲು ಕ್ರಮ ತೆಗೆದುಕೊಳ್ಳಲಾಗುವುದು.

ಮುಂಡರಗಿ ಆಯುರ್ವೇದಿಕ್ ಆಸ್ಪತ್ರೆ

491 - ಶ್ರೀ ಕೆ.ಹೆಚ್. ಕುರುಡಗಿ (ಮುಂಡರಗಿ) : ಮಾನ್ಯ ಭಾರತೀಯ ವೈದ್ಯ ಪದ್ಧತಿ ಮತ್ತು ಹೋಮಿಯೋಪತಿ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ತಾಲ್ಲೂಕು ಕ್ಷೇತ್ರವಾದ ಮುಂಡರಗಿ ಒಳರೋಗಿಗಳ ವಿಭಾಗದ ಆಯುರ್ವೇದ ಆಸ್ಪತ್ರೆಯನ್ನು ಮಂಜೂರು ಮಾಡುವ ಪ್ರಸ್ತಾವನೆ ಸರ್ಕಾರದ ಗಮನದಲ್ಲಿದೆಯೇ? ಹಾಗಿದ್ದಲ್ಲಿ ಎಂದು ಮಂಜೂರು ಮಾಡಲಾಗುವುದು?

ಶ್ರೀಮತಿ ಸುಮವಸಂತ (ಭಾರತೀಯ ವೈದ್ಯಪದ್ಧತಿ ಮತ್ತು ಹೋಮಿಯೋಪತಿ ಸಚಿವರು) :

ಅ) ಇಲ್ಲ.

ಆ) ಪ್ರಶ್ನೆ ಉದ್ಭವಿಸುವುದಿಲ್ಲ.

ಗದಗ ತಾಲ್ಲೂಕು ಪಾಪನಾಶಿಯಲ್ಲಿ ಆಯುರ್ವೇದಿಕ್ ಆಸ್ಪತ್ರೆ.

491(ಅ) - ಶ್ರೀ ಕೆ.ಹೆಚ್. ಕುರಡಗಿ (ಮುಂಡರಗಿ) : ಮಾನ್ಯ ಭಾರತೀಯ ವೈದ್ಯಪದ್ಧತಿ ಮತ್ತು ಹೋಮಿಯೋಪತಿ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಗದಗ ತಾಲ್ಲೂಕು ಪಾಪನಾಶಿ ಗ್ರಾಮದಲ್ಲಿ ಆಯುರ್ವೇದಿಕ್ ಆಸ್ಪತ್ರೆ ಮಂಜೂರಾಗಿದ್ದು, ಇದನ್ನು ಯಾವಾಗ ಪ್ರಾರಂಭಿಸಲಾಗುವುದು?

ಶ್ರೀಮತಿ ಸುಮವಸಂತ (ಭಾರತೀಯ ವೈದ್ಯಪದ್ಧತಿ ಮತ್ತು ಹೋಮಿಯೋಪತಿ ಸಚಿವರು) :

ಅ) ಗದಗ ತಾಲ್ಲೂಕು ಪಾಪನಾಶಿ ಗ್ರಾಮಕ್ಕೆ ಆಯುರ್ವೇದ ಔಷಧಾಲಯ ಮಂಜೂರಾಗಿರುವುದಿಲ್ಲ. ಇಲ್ಲಿ ಆಯುರ್ವೇದ ಔಷಧಾಲಯ ತೆರೆಯುವ ಬಗ್ಗೆ ಭಾರತೀಯ ವೈದ್ಯಪದ್ಧತಿ ಮತ್ತು ಹೋಮಿಯೋಪತಿ ನಿರ್ದೇಶಕರಿಂದ ಪ್ರಸ್ತಾವನೆ ಬಂದಿರುತ್ತದೆ. ಸರ್ಕಾರ ಯೋಜನಾ ಮತ್ತು ಆರ್ಥಿಕ ಇಲಾಖೆಯ ಸಹಮತಿ ಪಡೆದು ಮುಂದಿನ ಕ್ರಮ ಕೈಗೊಳ್ಳಲಾಗುವುದು.

ಪ್ರಾಥಮಿಕ ಆರೋಗ್ಯ ಕೇಂದ್ರಗಳಿಗೆ ವೈದ್ಯರುಗಳ ನೇಮಕ

371 - ಶ್ರೀ ಎ. ರುಕ್ಮಯ್ಯ ಪೂಜಾರಿ (ವಿಟ್ಲ) : ಮಾನ್ಯ ಆರೋಗ್ಯ ಮತ್ತು ಕು.ಕ. ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ರಾಜ್ಯದಲ್ಲಿ ಎಷ್ಟು ಪ್ರಾಥಮಿಕ ಆರೋಗ್ಯ ಕೇಂದ್ರಗಳಿವೆ?

ಆ) ಇವುಗಳಲ್ಲಿ ಎಷ್ಟು ಆರೋಗ್ಯ ಕೇಂದ್ರಗಳಲ್ಲಿ ವೈದ್ಯರ ಹುದ್ದೆಗಳು ಖಾಲಿ ಇವೆ?

ಇ) ಯಾವಾಗ ಭರ್ತಿ ಮಾಡಲಾಗುವುದು?

ಡಾ॥ ಎ.ಬಿ. ಮಲಕರೆಡ್ಡಿ (ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು):

ಅ) 1297

ಆ) 133

ಇ) ಸ್ನಾತಕೋತ್ತರ ಶಿಕ್ಷಣ ಮುಗಿಸಿ ವಾಪಸ್ಸು ಬರುವ ವೈದ್ಯರನ್ನು ನೇಮಕ ಮಾಡಿ ಭರ್ತಿ ಮಾಡಲಾಗುವುದು.